ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

File No:DTE-ADMI0ACM2/19 /2022

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:28-04-2022.

**-:: ಸುತ್ತೋಲೆ ::-**

**ವಿಷಯ:-** 2021-22ನೇ ಸಾಲಿನಲ್ಲಿ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ **ಅರೆಕಾಲಿಕ (ಪಾರ್ಟ್-ಟೈಮ್) ಡಿಪ್ಲೋಮಾ ಕೋರ್ಸುಗಳ ಪ್ರವೇಶಾವಧಿಯನ್ನು ವಿಸ್ತರಿಸುವ** ಬಗ್ಗೆ.

**ಉಲ್ಲೇಖ:-**
1. ಈ ಕಛೇರಿ ಸಮಸಂಖ್ಯೆ ಪ್ರವೇಶಾಧಿಸೂಚನೆ ದಿ:24-03-2022.
2. ಪ್ರಾಂಶುಪಾಲರು, ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು ಇವರ ಪತ್ರ ಸಂ. ಕೆಪಿಎಂ/05/ಪ್ರವೇಶ/2022-23/126, ದಿ:26-04-2022.
3. ಪ್ರಾಂಶುಪಾಲರು, ಎಸ್.ಜೆ ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು, ಇವರ ಪತ್ರ ಸಂ. ಎಸ್‌ಜೆಇಪಿ/02/ಪ್ರವೇಶ/2021, ದಿ:27-04-2022.

**********

ಎರಡು ವರ್ಷಗಳ ಐ.ಟಿ.ಐ/ದ್ವಿತೀಯ(ವಿಜ್ಞಾನ/ ತಾಂತ್ರಿಕ ವಿಷಯಗಳು)ಗಳಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ 2021-22ನೇ ಸಾಲಿನಲ್ಲಿ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ **ಅರೆಕಾಲಿಕ (ಪಾರ್ಟ್-ಟೈಮ್)** ಡಿಪ್ಲೋಮಾ ಕೋರ್ಸುಗಳ ಪ್ರವೇಶಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಿ, ಆಫ್-ಲೈನ್ ಮೂಲಕ ಪ್ರವೇಶ ನೀಡುವಂತೆ ಉಲ್ಲೇಖ(1)ರಲ್ಲಿ ದಿನಾಂಕವನ್ನು ನಿಗಧಿಪಡಿಸಲಾಗಿತ್ತು. ಉಲ್ಲೇಖ(2)ರ ಪ್ರಾಂಶುಪಾಲರ ಪತ್ರದಲ್ಲಿ ವಿದ್ಯಾರ್ಥಿಗಳ ಪ್ರವೇಶ ಅರ್ಜಿ ಸಲ್ಲಿಸಲು ಸಮಯಾವಕಾಶವನ್ನು ಕೇಳುತ್ತಿರುವುದಾಗಿ ಪ್ರವೇಶಾವಧಿಯನ್ನು ವಿಸ್ತರಿಸಲು ಹಾಗೂ ಉಲ್ಲೇಖ(3)ರ ಪ್ರಾಂಶುಪಾಲರ ಪತ್ರದಲ್ಲಿ ಭರ್ತಿ ಆಗದ ಉಳಿಕೆ ಸೀಟುಗಳನ್ನು ತುಂಬಲು ಪ್ರವೇಶ ಅವಧಿಯನ್ನು ವಿಸ್ತರಿಸಲು ಕೋರಿರುತ್ತಾರೆ.

ಪ್ರಿನ್ಸಿಪಾಲರುಗಳ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ **ಅರ್ಜಿ ಪಡೆಯುವ ಮತ್ತು ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ದಿನಾಂಕ:10-05-2022ರವರೆಗೆ** ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ. ನಿಯಮಗಳ ಪ್ರಕಾರ **ದಿ:12-05-2022** ರ ಒಳಗೆ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಪೂರ್ಣಗೊಳಿಸತಕ್ಕದ್ದು.

*ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.*

ಜಂಟಿ ನಿರ್ದೇಶಕರು(ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

**ಇವರಿಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು
3. ಪ್ರಿನ್ಸಿಪಾಲರು, ಎಂ.ಇ.ಐ ಪಾಲಿಟೆಕ್ನಿಕ್, ಬೆಂಗಳೂರು

**ಪ್ರತಿ ಮಾಹಿತಿಗಾಗಿ:-**

1) ಮಾನ್ಯ ಆಯುಕ್ತರ ಆಪ್ತಶಾಖೆಗೆ.
2) ಮಾನ್ಯ ನಿರ್ದೇಶಕರ ಆಪ್ತಶಾಖೆಗೆ.
3) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4) ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5) ಇ-ಆಡಳಿತ ವಿಭಾಗಕ್ಕೆ – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6) ಡಿವಿಪಿ (1) & (2) ವಿಭಾಗಕ್ಕೆ ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
7) ಕಡತಕ್ಕೆ.